# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 21-08-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು.
2. ಶ್ರೀ.ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು.
3. ಡಾ॥ ಕಾವ್ಯ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು.
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ).
6. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿನ ಅನೇಕ ರಸ್ತೆಗಳಲ್ಲಿ ರಸ್ತೆ ಕತ್ತರಿಸಿರುವುದು ಕಂಡು ಬಂದಿದ್ದು, ಕೂಡಲೇ ಇವುಗಳನ್ನು ಮುಚ್ಚಲು ಕ್ರಮ ಕೈಗೊಳ್ಳಲು ಸಭಾ ಗಮನಕ್ಕೆ ತಂದಾಗ ಸಬೆಯಲ್ಲಿ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ವಾರ್ಡ್ ಪ್ರದೇಶದಲ್ಲಿ ಬೆಸ್ಕಾಂ ವಿಭಾಗದವರು ವಿದ್ಯುತ್ ಭೂಗತ ಕೇಬಲ್‌ಗಳನ್ನು ಅಳವಡಿಸುತ್ತಿದ್ದು, ಇದರಿಂದ ಎಲ್ಲಾ ರಸ್ತೆಗಳಲ್ಲಿ ರಸ್ತೆ ಕತ್ತರಿಸಲಾಗಿರುತ್ತದೆ. ಮತ್ತು ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಇಂಜಿನಿಯರ್ ಮಾತನಾಡಿ, ಭೂಗತ ಕೇಬಲ್‌ಗಳನ್ನು ಅಳವಡಿಸುವ ಕಾಮಗಾರಿ ಪೂರ್ಣಗೊಂಡ ತಕ್ಷಣ ರಸ್ತೆ ಕತ್ತರಿಸಿದ ಭಾಗಗಳಿಗೆ ಡಾಂಬರು ಹಾಕಲಾಗುವುದೆಂದು ಸಭೆಗೆ ತಿಳಿಸಿದರು.

2) **ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ,** ಹೆಚ್.ಬಿ.ಆರ್ ಬಡಾವಣೆ 1ನೇ ಬ್ಲಾಕ್ ಪ್ರದೇಶದಲ್ಲಿ ದ್ವಿಚಕ್ರ ವಾಹನ ಸವಾರರು ವ್ಹೀಲಿಂಗ್ ಮಾಡುವ



Scanned with CamScanner

ಮೂಲಕ ಸಾರ್ವಜನಿಕರಿಗೆ ರಸ್ತೆಯಲ್ಲಿ ಓಡಾಡಲು ತೊಂದರೆಯಾಗುತ್ತಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ, ಸಂಚಾರಿ ಪೊಲೀಸ್ ಅಧಿಕಾರಿಗಳು ಈ ಪ್ರದೇಶವು ಕಾಡುಗೊಂಡನಹಳ್ಳಿ ಪೊಲೀಸ್ ಠಾಣೆಯ ವ್ಯಾಪ್ತಿಗೆ ಒಳಪಡುವುದರಿಂದ ಸದರಿಯವರಿಗೆ ಕ್ರಮ ವಹಿಸಲು ತಿಳಿಸುವುದಾಗಿ, ಸಭೆಗೆ ತಿಳಿಸಿದರು.

3) ಶ್ರೀ ಹೆನ್ರಿ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಹೆಚ್.ಬಿ.ಆರ್ 1ನೇ ಬ್ಲಾಕ್‌ನಲ್ಲಿ ಘನತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಡೆಯುತ್ತಿದೆ ಎಂದು ಸಭಾ ಗಮನಕ್ಕೆ ತಿಳಿಸುತ್ತಾ, ರಸ್ತೆಗಳಲ್ಲಿ ಬೀಳುವ ಕಸವನ್ನು ಸಮರ್ಪಕ ಗುಡಿಸುವಿಕೆಯನ್ನು ಮತ್ತಷ್ಟು ತೀವ್ರಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ, ಆರೋಗ್ಯ ನಿರೀಕ್ಷಕರು ಮಾತನಾಡಿ, ಇನ್ನೂ ಹೆಚ್ಚಿನ ಪೌರ ಕಾರ್ಮಿಕರನ್ನು ನಿಯೋಜಿಸಿ, ಕ್ರಮ ವಹಿಸಲಾಗುವುದೆಂದು ಸಭೆಗೆ ತಿಳಿಸಿದರು.

4) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿನ ಬಡಾವಣೆಗಳಿಗೆ ರೆವಿನ್ಯೂ ವಿಭಾಗದವರು ಮನೆ ಮನೆಗಳಿಗೆ ಆಗಮಿಸಿ, ಮತದಾರರ ಗುರುತಿನ ಚೀಟಿಯನ್ನು ನೀಡಲು ಕ್ರಮ ವಹಿಸುತ್ತಿರುತ್ತಾರೆ. ಆದರೆ ಈ ಕ್ರಮ ಕೈಗೊಳ್ಳುವಾಗ ಅಕ್ಕಪಕ್ಕದ ಮನೆಗಳ ಸಾರ್ವಜನಿಕರಿಂದ ಮನೆಯಲ್ಲಿ ವಾಸಿಸುತ್ತಿರುವವರನ್ನು ವಿಚಾರಿಸಿ, ದೃಢಪಡಿಸಿಕೊಂಡು, ಮತದಾರರ ಪಟ್ಟಿಯಲ್ಲಿ ನಮೂದಿಸಲು ಕ್ರಮ ಕೈಗೊಳ್ಳಲು ಪ್ರಸ್ತಾಪಿಸಿದಾಗ, ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ, ಸಭೆಯಲ್ಲಿ ಹಾಜರಿದ್ದ ಕಂದಾಯ ಪರಿವೀಕ್ಷಕರು ಮಾತನಾಡಿ, ಪರಿವೀಕ್ಷಣೆಗೆ ಹೊರಟಾಗ ಎಲ್ಲಾ ಮನೆಗಳ ಅಕ್ಕ ಪಕ್ಕದಲ್ಲಿನ ಸಾರ್ವಜನಿಕರನ್ನು ವಿಚಾರಿಸಿ, ದೃಢಪಡಿಸಿಕೊಂಡು ಕ್ರಮ ವಹಿಸಲಾಗುವುದೆಂದು ಸಭೆಗೆ ತಿಳಿಸಿದರು.

5) ಶ್ರೀ ಹೆನ್ರಿ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಹೆಚ್.ಬಿ.ಆರ್ ಬಡಾವಣೆ 1ನೇ ಎ ಮುಖ್ಯರಸ್ತೆ ನಿವೇಶನ ಸಂಖ್ಯೆ.21ರ ಎದುರಿನಲ್ಲಿ ಎರಡು ವಿದ್ಯುತ್ ದೀಪಗಳ ಅವಶ್ಯಕತೆ ಇರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಈ ಬಗ್ಗೆ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ, ವಿದ್ಯುತ್ ದೀಪಗಳ ಅಧಿಕಾರಿಗಳು ಸಭೆಗೆ ಗೈರು ಹಾಜರಾಗಿದ್ದುದರಿಂದ ಮುಂದಿನ ಸಭೆಯಲ್ಲಿ ಚರ್ಚಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.

6) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ರಾಮಯ್ಯ ಬಡಾವಣೆಯಲ್ಲಿ ವಿದ್ಯುತ್ ದೀಪಗಳ ಟೈಮರ್‌ಗಳು ಹಾಳಾಗಿದ್ದು, ಹಾಗೂ ಸತತವಾಗಿ ರಾತ್ರಿ ಹಗಲು ಉರಿಯುತ್ತಿರುತ್ತವೆ. ಇವುಗಳನ್ನು ಕೂಡಲೇ ಸರಿಪಡಿಸಲು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಬೆಸ್ಕಾಂ ಅಧಿಕಾರಿಗಳು ಗೈರು ಹಾಜರಾಗಿದ್ದರಿಂದ ಮುಂದಿನ ಸಭೆಯಲ್ಲಿ ಚರ್ಚಿಸಿ, ತೀರ್ಮಾನುಸಲು ಸಭೆಯು ಅನುಮೋದಿಸಿತು.

7) ಡಾ॥ ಕಾವ್ಯ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ, ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ವಾರ್ಡ್ ಕಛೇರಿಯ ಆಸ್ಪತ್ರೆಯಲ್ಲಿ ಕೋವಿಡ್–19 ಪರೀಕ್ಷೆಗಳನ್ನು ಸತತವಾಗಿ ನಡೆಸುತ್ತಿದ್ದು, ಒಟ್ಟು 09 ಸಕ್ರಿಯ ಪ್ರಕರಣಗಳಲ್ಲಿ 08 ಹೋಮ್ ಐಸೋಲೇಷನ್, 01 ಜನ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಮಾಡಲಾಗುತ್ತಿರುತ್ತದೆ. ಪ್ರಸ್ತುತ 38581 ಸಾರ್ವಜನಿಕರಿಗೆ ಪರೀಕ್ಷೆ ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 26913 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.



Scanned with CamScanner

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar. A
30/8/2021
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಪ್ರತಿಯನ್ನು,

01/09/2021
1/9/21

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ. – 1/9/21
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner